(15)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2017-18ನೇ ಸಾಲಿನ ಆಯವ್ಯಯದ ಘೋಷಣೆಯನ್ವಯ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಶ್ರೀ ಟಿ. ಬಿ. ಸೋಲಬಕ್ಕನವರ ಶಿಲ್ಪಾ ಕಲಾ ಕುಟೀರದ ಸೇವೆಯನ್ನು ಪಡೆಯಲು 4(ಜಿ)ರಡಿ ವಿನಾಯಿತಿ ನೀಡುವ ಕುರಿತು.

ಓದಲಾಗಿದೆ :

1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 35 ಜೈಅಯೋ 2017, ದಿನಾಂಕ 20.05.2017.
2. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 36(1) ಜೈಅಯೋ 2017, ದಿನಾಂಕ 27.07.2017
3. MGIRED ಪತ್ರ ಸಂಖ್ಯೆ MGI/RTP/53/2015-16/258, ದಿನಾಂಕ 20.07.2017.
4. ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ ಆಇ/978/ವೆಚ್ಚ-12/2017, ದಿನಾಂಕ 26.10.2017.

## ಪ್ರಸ್ತಾವನೆ :

**2017-18ನೇ** ಸಾಲಿನ ಆಯವ್ಯಯ ಘೋಷಣೆಯಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆಗೆ ಆಯವ್ಯಯದಡಿ ನಿಗದಿಪಡಿಸಲಾದ ಅನುದಾನ ರೂ.300.00 ಲಕ್ಷ ಹಾಗೂ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃಧಿ ಮಂಡಳಿವತಿಯಿಂದ ರೂ.113.00 ಲಕ್ಷಗಳನ್ನು ಅಂದರೆ ರೂ.413.00 ಲಕ್ಷಗಳನ್ನು ಓದಲಾದ(1&2)ರ ಆದೇಶಗಳಲ್ಲಿ ಬಿಡುಗಡೆ ಮಾಡಿದೆ.

ಓದಲಾದ (3)ರ ಪತ್ರದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, MGIRED ರವರ ಕೋರಿಕೆಯನ್ವಯ ಹಾಗೂ ಮೇಲೆ (4)ರಲ್ಲಿ ಓದಲಾದ ಆರ್ಥಿಕ ಇಲಾಖೆಯ ಅಧಿಸೂಚನೆಯನ್ವಯ, MGIRED ಸಂಸ್ಥೆಯಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆಗೆ ಶ್ರೀ ಟಿ. ಬಿ. ಸೋಲಬಕ್ಕನವರ ಶಿಲ್ಪಾ ಕಲಾ ಕುಟೀರ ರವರ ಸೇವೆಯನ್ನು ರೂ.6.90ಕೋಟಿಗಳ ವೆಚ್ಚದಲ್ಲಿ ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಕಲಂ 4(ಜಿ)ರಡಿ ವಿನಾಯಿತಿ ನೀಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/53/ಜೈಅಯೋ/2017 ಬೆಂಗಳೂರು, ದಿನಾಂಕ.02.11.2017.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ **2017-18**ನೇ ಸಾಲಿನ ಆಯವ್ಯಯದಡಿ ಘೋಷಿಸಲಾದಂತೆ MGIRED, ಸಂಸ್ಥೆ ಬೆಂಗಳೂರು ಇಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆಗೆ ಶ್ರೀ ಟಿ. ಬಿ. ಸೋಲಬಕ್ಕನವರ ಶಿಲ್ಪಾ ಕಲಾ ಕುಟೀರ ರವರಿಂದ ಸೇವೆಯನ್ನು ರೂ.6.90ಕೋಟಿ ವೆಚ್ಚದಲ್ಲಿ ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಕಲಂ 4(ಜಿ)ರಡಿ ವಿನಾಯಿತಿ ನೀಡಿ ಆದೇಶಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು, MGIRED ರವರು ಸದರಿ ಯೋಜನೆಯ ನಿರ್ಮಾಣಕ್ಕೆ ಸಂಬಂಧಿಸಿದಂತೆ ಶ್ರೀ ಟಿ. ಬಿ. ಸೋಲಬಕ್ಕನವರ ಶಿಲ್ಪಾ ಕಲಾ ಕುಟೀರ ರವರಿಂದ ಉತ್ತಮ ಗುಣಮಟ್ಟದ ಸೇವೆಯನ್ನು ಸಮಂಜಸ ದರದಲ್ಲಿ ಸಂಗ್ರಹಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮಕೈಗೊಂಡು ಸರ್ಕಾರಕ್ಕೆ ದೃಢೀಕರಣವನ್ನು ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು.
5. ಜಂಟಿ ನಿರ್ದೇಶಕರು ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಅಪಂ ರಾಜ್ ಇಲಾಖೆ.
2. ನಿರ್ದೇಶಕರು, ಪಿಎಂಐ, ಗ್ರಾಅಪಂ.ರಾಜ್ ಇಲಾಖೆ.
3. ಉಪ ನಿರ್ದೇಶಕರು (ತಾಂತ್ರಿಕ), ಗ್ರಾಮೂಸೌ ಕೋಶ, ಗ್ರಾಅಪ ಇಲಾಖೆ.
4. ಉಪ ನಿರ್ದೇಶಕರು, TNMC, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
5. ವಿಶೇಷಾಧಿಕಾರಿ, ಇಲಾಖಾ ಗಣಕ ಕೇಂದ್ರ, ಗ್ರಾಅಪಂ.ಇಲಾಖೆ.
6. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.